# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **360** |
| ಸದಸ್ಯರ ಹೆಸರು | : | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 10-03-2025 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಸಚಿವರು |

***

| | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ತಾಲ್ಲೂಕು, ಉಜಿರೆ ಗ್ರಾಮದಲ್ಲಿ 30 ಕೆ.ವಿ. ವಿದ್ಯುತ್ ಘಟಕ ಪ್ರಾರಂಭ ಮಾಡುವ ಪ್ರಕ್ರಿಯೆ ಪ್ರಸ್ತುತ ಯಾವ ಹಂತದಲ್ಲಿದೆ; | ಮೆಸ್ಕಾಂ ವ್ಯಾಪ್ತಿಯ ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ತಾಲ್ಲೂಕು, ಉಜಿರೆ ಗ್ರಾಮದ ನಿನ್ನಿಕಲ್ಲು ಎಂಬಲ್ಲಿ 33/11ಕೆವಿ ವಿದ್ಯುತ್ ವಿತರಣಾಕೇಂದ್ರ ಸ್ಥಾಪಿಸಲು ಈಗಾಗಲೇ LOI (Letter of Intent) ನೀಡಲಾಗಿದ್ದು, ಪ್ರಸ್ತುತ, DWA (Detailed Work Award) ನೀಡುವ ಹಂತದಲ್ಲಿದೆ. |
| ಆ) | ಸದರಿ ಕಾಮಗಾರಿಗೆ ಬೇಕಾಗಿರುವ ಜಾಗವನ್ನು ನಿಗದಿ ಮಾಡಿ ಸಂಬಂಧಿಸಿದ ಟೆಂಡರ್ ಪ್ರಕ್ರಿಯೆಯನ್ನು ಈಗಾಗಲೇ ಪೂರ್ಣಗೊಳಿಸಲಾಗಿದೆಯೇ; | ಸದರಿ ಕಾಮಗಾರಿಗೆ ಬೆಳ್ತಂಗಡಿ ತಾಲ್ಲೂಕು, ಉಜಿರೆ ಗ್ರಾಮದ ಸರ್ವೆ ನಂ:393/3 ರಲ್ಲಿ 0.96 ಎಕರೆ ಸರಕಾರಿ ಜಮೀನಿಗೆ ಮಂಜೂರಾತಿ ದೊರೆತಿದ್ದು, ಜಮೀನು ಹಸ್ತಾಂತರ ಪ್ರಕ್ರಿಯೆ ಪ್ರಗತಿಯಲ್ಲಿದೆ. ಸದರಿ ಕಾಮಗಾರಿಗೆ ಸಂಬಂಧಿಸಿದ ಟೆಂಡರ್ ಪ್ರಕ್ರಿಯೆಯನ್ನು ಈಗಾಗಲೇ ಪೂರ್ಣಗೊಳಿಸಲಾಗಿದೆ. |
| ಇ) | ಸದರಿ ಕಾಮಗಾರಿಗೆ ಬೇಕಾಗಿರುವ ಜಾಗವನ್ನು ಈಗಾಗಲೇ ನಿಗದಿ ಮಾಡಿ, ಸಂಬಂಧಿಸಿದ ಟೆಂಡರ್ ಪ್ರಕ್ರಿಯೆಯನ್ನು ಸಹ ಪೂರ್ಣಗೊಳಿಸಲಾಗಿದ್ದಲ್ಲಿ, ಇದುವರೆಗೂ ಕಾಮಗಾರಿ ಪ್ರಾರಂಭ ಮಾಡದೇ ಇರಲು ಕಾರಣಗಳೇನು; | ವಿದ್ಯುತ್ ವಿತರಣ ಕೇಂದ್ರ ಸ್ಥಾಪಿಸಲು ದಿನಾಂಕ 05-02-2025 ರಂದು LOI ನೀಡಲಾಗಿದ್ದು, DWA ನೀಡಿದ ಕೂಡಲೇ ಮೆಸ್ಕಾಂ ವತಿಯಿಂದ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು. |
| ಈ) | ಯಾವ ಕಾಲಮಿತಿಯೊಳಗೆ, ಸದರಿ ಕಾಮಗಾರಿಯನ್ನು ಪ್ರಾರಂಭಿಸಿ ಲೋಕಾರ್ಪಣೆಗೊಳಿಸಲಾಗುವುದು? | ಟೆಂಡರ್ ನಿಬಂಧನೆಯಂತೆ ಸದರಿ ಕಾಮಗಾರಿಯನ್ನು DWA ನೀಡಿದ ದಿನಾಂಕದಿಂದ 12 ತಿಂಗಳೊಳಗೆ ಪೂರ್ಣಗೊಳಿಸಲು ಕಾಲಮಿತಿಯನ್ನು ನಿಗದಿಪಡಿಸಲಾಗುವುದು. |

ಸಂಖ್ಯೆ: ಎನರ್ಜಿ 44 ಇಬಿಎಸ್ 2025

(ಕೆ.ಜೆ.ಜಾರ್ಜ್)
ಇಂಧನ ಸಚಿವರು